# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2018-19ನೇ ಸಾಲಿನಲ್ಲಿ ರಾಜ್ಯದಲ್ಲಿರುವ ಮದರಸಗಳಿಗೆ ಆಧುನಿಕರಣ, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ ನೀಡಲು ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾದ**

1. ಸರ್ಕಾರದ ಆದೇಶ ಸಂಖ್ಯೆ:MWD 175 MDS 2016 ದಿನಾಂಕ:03-01-2017 ಮತ್ತು ತಿದ್ದುಪಡಿ ಆದೇಶ ದಿನಾಂಕ:27-01-2017.
2. ಸರ್ಕಾರದ ಆದೇಶ ಸಂಖ್ಯೆ: MWD 257 MDS 2018 ದಿನಾಂಕ :11-04-2018, 30-07-2018, 15-10-2018.
3. ಸರ್ಕಾರದ ಆದೇಶ ಸಂಖ್ಯೆ: MWD 101 WES 2018 (1) & (2) ದಿನಾಂಕ :14-09-2018 ಮತ್ತು 06-12-2018.
4. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಅಸಂನಿ/ಮದರಸ/ಸಿಆರ್-/2018-19, ದಿನಾಂಕ:03-11-2018.

******

**ಪ್ರಸ್ತಾವನೆ:**

ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2016-17ನೇ ಸಾಲಿನಲ್ಲಿ ರಾಜ್ಯದಲ್ಲಿರುವ ಮದರಸಗಳಿಗೆ ಆಧುನಿಕರಣ, ಔಪಚಾರಿಕ ಮತ್ತು ಗಣಿಕೀಕೃತ ಶಿಕ್ಷಣ ನೀಡಲು ಅನುದಾನ ಮಂಜೂರು ಮಾಡುವ ಯೋಜನೆ ಕಾರ್ಯಕ್ರಮಗಳನ್ನು ಜಾರಿಗೊಳಿಸಲು ಮೇಲೆ ಓದಲಾದ ಕ್ರ.ಸಂ.(1) ರಲ್ಲಿ ಸರ್ಕಾರದ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ.(2) ರಲ್ಲಿ ಮದರಸದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವ ಸಲುವಾಗಿ (Providing quality Education in Madrasa) 2018-19ನೇ ಸಾಲಿನ ಆಯವ್ಯಯ **ಲೆಕ್ಕ ಶೀರ್ಷಿಕೆ 2225-03-102-3-10(103)** ಸರ್ಕಾರದಿಂದ ರೂ.40.00ಕೋಟಿ ಅನುದಾನವನ್ನು ನಿಗಧಿಪಡಿಸಲಾಗಿದ್ದು, ಅದರಲ್ಲಿ ಮೊದಲನೇ, ಎರಡನೇ ಹಾಗೂ ಮೂರನೇ ತ್ರೈಮಾಸಿಕ ಕಂತಿನ ಅನುದಾನ ಒಟ್ಟು ರೂ.3333.20 ಲಕ್ಷ ಬಿಡುಗಡೆ ಮಾಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ.(3)ರಲ್ಲಿ ರಾಜ್ಯದ 18 ಜಿಲ್ಲೆಗಳಲ್ಲಿರುವ 35 ಮದರಸಗಳಿಗೆ ಆಧುನಿಕರಣ, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣಕ್ಕಾಗಿ ರೂ.2,98,00000/-ಗಳನ್ನು ಮಂಜೂರು ಮಾಡಲಾಗಿರುತ್ತದೆ. ಅದರಲ್ಲಿ ಉಳಿಕೆ ರೂ.3035.20ಲಕ್ಷಗಳಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(4)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರಿಂದ ರಾಜ್ಯದಲ್ಲಿರುವ ಮದರಸಗಳಿಗೆ ಆಧುನಿಕರಣ, ಔಪಚಾರಿಕ, ಗಣಕೀಕೃತ ಶಿಕ್ಷಣ ನೀಡಲು ಅನುದಾನ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಗಳು ಬಂದಿದ್ದು ಸದರಿ ಪ್ರಸ್ತಾವನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: MWD 101 WES 2018, (3)
## ಬೆಂಗಳೂರು, ದಿನಾಂಕ:18-12-2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಅನುಬಂಧದಲ್ಲಿ ಸೂಚಿಸಿರುವಂತೆ ಮೂರನೇ ಹಂತದಲ್ಲಿ ರಾಜ್ಯದ 14 ಜಿಲ್ಲೆಗಳಲ್ಲಿರುವ 59 ಮದರಸಗಳಿಗೆ ಆಧುನಿಕರಣ, ಔಪಚಾರಿಕ ಮತ್ತು ಗಣಕೀಕೃತ ಶಿಕ್ಷಣ ನೀಡಲು 2018-19ನೇ ಸಾಲಿನ ಆಯವ್ಯಯ **ಲೆಕ್ಕ ಶೀರ್ಷಿಕೆ:2225-03-102-3-10(103)** ರಡಿಯಲ್ಲಿ ಒದಗಿಸಿರುವ ಒಟ್ಟು ಅನುದಾನ ರೂ.40.00 ಕೋಟಿಗಳ ಪೈಕಿ ಮೊದಲನೇ, ಎರಡನೇ ಹಾಗೂ ಮೂರನೇ ತ್ರೈಮಾಸಿಕ ಕಂತಿನ ಅನುದಾನ ರೂ.3333.20ಲಕ್ಷ ಈಗಾಗಲೇ ಬಿಡುಗಡೆ ಮಾಡಲಾಗಿದ್ದು. ಸದರಿ ಅನುದಾನದಲ್ಲಿ **ರೂ.557,00,000/- (ಐದು ಕೋಟಿ ಐವತ್ತೇಳು ಲಕ್ಷ ರೂಪಾಯಿಗಳು ಮಾತ್ರ)** ಅನುದಾನವನ್ನು ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿ ವಿವರಿಸಿರುವಂತೆ ಜಿಲ್ಲಾವಾರು ಮಂಜೂರು ಮಾಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಲು ಆದೇಶಿಸಿದೆ.

**ಷರತ್ತುಗಳು :**

1. ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ:- "2225-03-102-3-10(103)" ಮದರಸಾಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ಸಹಾಯಧನ ರಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

2. ಸದರಿ ಅನುದಾನವು ಒಂದು ಸಂಸ್ಥೆಗೆ ಕೇವಲ ಒಂದು ಬಾರಿ ಮಾತ್ರ ಪಡೆದುಕೊಳ್ಳಲು ಅವಕಾಶವಿರುತ್ತದೆ. (One time Grants)

3. ಈ ಆದೇಶದನ್ವಯ ಒದಗಿಸಲಾಗಿರುವ ಅನುದಾನವನ್ನು ಅನುಬಂಧದಲ್ಲಿ ನಮೂದಿಸಿರುವ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಇನ್ನಿತರ ಬಾಬ್ತುಗಳಿಗೆ ಉಪಯೋಗಿಸಿಕೊಂಡಲ್ಲಿ ಸಂಬಂಧಪಟ್ಟವರ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದು.

4. ಸದರಿ ಅನುದಾನವನ್ನು ಉಪಯೋಗಿಸಿಕೊಂಡ ಬಗ್ಗೆ ಉಪಯೋಗಿತ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

5. ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ನಡೆಸಲ್ಪಡುತ್ತಿರುವ ಮೊರಾರ್ಜಿದೇಸಾಯಿ ವಸತಿ/ ಮಾದರಿ ವಸತಿ ಶಾಲೆ/ ಕಾಲೇಜು, ಸರ್ಕಾರಿ ಮುಸ್ಲಿಂ ವಸತಿ ಶಾಲೆ ಹಾಗೂ ಮೌಲಾನಾ ಆಜಾದ್ ಮಾದರಿ ವಸತಿ ಶಾಲೆಗಳಲ್ಲಿ ಅರೇಬಿಕ್ ಶಿಕ್ಷಣ ಭೋಧನೆ ಮಾಡಲು ಮಾಸಿಕ ರೂ.7,000/- (ಏಳು ಸಾವಿರ ರೂ.ಗಳು ಮಾತ್ರ) ಗಳ ಗೌರವ ಧನ ನೀಡಿ ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಕ್ರಮವಹಿಸತಕ್ಕದ್ದು.

................3